ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

2020-21ನೇ ಶೈಕ್ಷಣಿಕ ವರ್ಷಕ್ಕೆ ಫೀ ಪಾವತಿಸಲು ಒತ್ತಾಯಿಸುತ್ತಿರುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):-

615(720) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳು 2020-21ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ, ವಿದ್ಯಾರ್ಥಿಗಳ ಪೂರ್ಣ ಫೀ ಪಾವತಿಸದಿದ್ದರೆ ಆನ್‌ಲೈನ್ ತರಗತಿಗಳನ್ನು ನಿಲ್ಲಿಸುವುದಾಗಿ ಪೋಷಕರಿಗೆ ಬೆದರಿಕೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಶಿಕ್ಷಣ ಸಂಸ್ಥೆಗಳು 2020-21ನೇ ಶೈಕ್ಷಣಿಕ ವರ್ಷದಲ್ಲಿ ಆನ್‌ಲೈನ್ ತರಗತಿಗಳನ್ನು ನಡೆಸಿರುವುದನ್ನು ಬಿಟ್ಟರೆ, ಈ ಹಿಂದಿನ ವರ್ಷಗಳಲ್ಲಿ ಒದಗಿಸಿದ ಯಾವುದೇ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ನೀಡಿರುವುದಿಲ್ಲ ಎಂಬ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ರೀತಿ ಅವೈಜ್ಞಾನಿಕವಾಗಿ ವಿದ್ಯಾರ್ಥಿಗಳ ಪೂರ್ಣ ಫೀ ಪಾವತಿಸಲೇಬೇಕು ಎಂದು ಪಟ್ಟು ಹಿಡಿದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಇದುವರೆಗೆ ಕೈಗೊಂಡ ಕ್ರಮವೇನು;

(ಈ) ವಿದ್ಯಾರ್ಥಿಗಳ ಪೂರ್ಣ ಫೀ ಪಾವತಿಸಲೇಬೇಕು ಎಂಬ ಖಾಸಗಿ ಶಿಕ್ಷಣ ಸಂಸ್ಥೆಗಳ ನಿಲುವಿಗೆ ಸರ್ಕಾರದ ಸಹಮತ ಇದೆಯೇ; ಇಲ್ಲದಿದ್ದಲ್ಲಿ ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು?